**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 31/2024**

**ಚಾ.ಸಾಃ 8, ಫಿರ್ಯಾ.ಸಾಃ 5**

| | |
|---|---|
| ಸಾಕ್ಷಿದಾರನ ಹೆಸರು | ಹುಸೇನ್ ಸಾಬ್ |
| ತಂದೆಯ ಹೆಸರು | ಅಬ್ದುಲ್ ರೆಹಮಾನ್ ಸಾಬ್ |
| ವಯಸ್ಸು | 33 ವರ್ಷಗಳು |
| ಉದ್ಯೋಗ | ಮೀನುಗಾರಿಕೆ |
| ವಾಸ್ತವ್ಯ | ನಡುಚಿಟ್ಟೆ, ಕರ್ಕಿ, ಹೊನ್ನಾವರ ತಾಲೂಕು |

**ಸಾಕ್ಷಿಯನ್ನು ದಿನಾಂಕಃ 06-06-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನಾನು ನೋಡಿಲ್ಲ. ನಾನು ಯಾವುದೇ ಅಪಘಾತವನ್ನು ನೋಡಿಲ್ಲ. ಪೋಲೀಸರಿಗೆ ಹೇಳಿಕೆ ನೀಡಿರುವುದಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

ದಿನಾಂಕ 13-11-2023 ರಂದು ಸಂಜೆ 06-40 ರ ಸುಮಾರು ನಾನು ಮತ್ತು ನನ್ನ ಸ್ನೇಹಿತ ಚಾಸಾ-7 ರವರು ಕರ್ಕಿ ರೈಲ್ವೆ ಸ್ಟೇಶನ್ ಕ್ರಾಸನಲ್ಲಿ ರಾಷ್ಟ್ರೀಯ ಹೆದ್ದಾರಿಯ ಪಕ್ಕದಲ್ಲಿ ನಿಂತುಕೊಂಡು ಮಾತನಾಡುತ್ತಿದ್ದಾಗ ನ್ಯಾಯಾಲಯದ ಮುಂದಿರುವ ಆರೋಪಿಯು ಹೊನ್ನಾವರ ಕಡೆಯಿಂದ ಕುಮಟಾ ಕಡೆಗೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾರನ್ನು ಚಲಾಯಿಸಿಕೊಂಡು ಬರುತ್ತಿದ್ದು ಕರ್ಕಿ ರೈಲ್ವೆಸ್ಟೇಶನ್ ಕ್ರಾಸನಲ್ಲಿ ಕಾರನ್ನು ಅತಿವೇಗ ಮತ್ತು ನಿಷ್ಕಾಳಜಿಯಿಂದ ಚಲಾಯಿಸಿಕೊಂಡು ಬಂದು ಯಾವುದೇ ಮುನ್ಸೂಚನೆ ಕೊಡದೇ ಏಕಾ ಏಕಿ ಬಲಕ್ಕೆ ತಿರುಗಿಸಿಕೊಂಡು ಕುಮಟಾ ಕಡೆಯಿಂದ ಬರುತ್ತಿದ್ದ ಬೈಕಿಗೆ ಡಿಕ್ಕಿ ಪಡಿಸಿದ್ದು ಅದನ್ನು ನಾನು ಕಣ್ಣಾರೆ ನೋಡಿದ್ದೇನೆ ಎಂದರೆ ಅದು ಸರಿಯಲ್ಲ. ಸದರಿ ಅಪಘಾತದಿಂದ ಬೈಕ್ ಸವಾರ ಮತ್ತು ಹಿಂಬದಿ ಸವಾರರಿಗೆ ಗಾಯಗಳಾದ್ದು ಬೈಕ್ ಸವಾರ ಚಿಕಿತ್ಸೆ ಪಡೆಯುವ ಕಾಲಕ್ಕೆ ಅಪಘಾತ ಆದ 3 ದಿನಗಳ ನಂತರ ಮೃತಪಟ್ಟಿದ್ದು ಸದರಿ ಅಪಘಾತಕ್ಕೆ ನ್ಯಾಯಾಲಯದ ಮುಂದೆ ಇರುವ ಆರೋಪಿಯ ನಿಷ್ಕಾಳಜಿತನವೇ ಕಾರಣ ಎಂದರೆ ಸರಿಯಲ್ಲ. ಅಪಘಾತವನ್ನು ಕಣ್ಣಾರೆ ನೋಡಿರುವುದಾಗಿ ಈಗ ಓದಿ ಹೇಳಿದಂತೆ ಪೋಲೀಸರಿಗೆ ಹೇಳಿಕೆ ಮತ್ತು ಮರು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಹೇಳಿಕೆ ಮತ್ತು ಮರು ಹೇಳಿಕೆಯ ಭಾಗವನ್ನು ನಿಪಿ-14 ಮತ್ತು 15 ಎಂದು ಗುರುತಿಸಲಾಯಿತು. ಅಪಘಾತವನ್ನು

ಕಣ್ಣಾರೆ ನೋಡಿದ್ದು ನಿಪಿ-14 ಮತ್ತು 15ರಂತೆ ಹೇಳಿಕೆ ಮತ್ತು ಮರು ಹೇಳಿಕೆ ನೀಡಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**